# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ನಾರಾಯಣ ಹುಡಗಿ, ಅಂದಿನ ದ್ವಿತೀಯ ದರ್ಜೆ ಉಗ್ರಾಣ ಸಹಾಯಕರು (ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಲಬುರಗಿ ಇವರು ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ – ಆದೇಶ

**ಓದಲಾಗಿದೆ.**

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 21 ಇಎನ್‌ಕ್ಯೂ 2005 ದಿನಾಂಕ 24.08.2005.
2. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 21 ಇಎನ್‌ಕ್ಯೂ 2005 ದಿನಾಂಕ. 27.03.2006.
3. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 21 ಇಎನ್‌ಕ್ಯೂ 2005 ದಿನಾಂಕ. 27.11.2012
4. ಶ್ರೀ ನಾರಾಯಣ ಹುಡಗಿ ರವರು ಸಲ್ಲಿಸಿರುವ ಮನವಿ ದಿನಾಂಕ. 26.09.2016

**ಪ್ರಸ್ತಾವನೆ:**

ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಲಬುರಗಿ ಇಲ್ಲಿ ಏಪ್ರಿಲ್ 1995 ರಿಂದ ಮೇ 1999 ರವರೆಗಿನ ಅವಧಿಯಲ್ಲಿ ಉಗ್ರಾಣ ಸಾಮಗ್ರಿಗಳ ಕೊರತೆಗೆ ಕಾರಣರಾದ 4 ಜನ ನೌಕರರನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 24.08.2005ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಲಾಗಿದ್ದು, ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರು ಶ್ರೀ ನಾರಾಯಣ ಹುಡಗಿ, ಅಂದಿನ ದ್ವಿತೀಯ ದರ್ಜೆ ಉಗ್ರಾಣ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಲಬುರಗಿ ಇವರನ್ನು ದಿನಾಂಕ 05.09.2005ರಂದು ಅಮಾನತ್ತುಪಡಿಸಿರುತ್ತಾರೆ. ನಂತರ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 27.03.2006ರ ಆದೇಶದಲ್ಲಿ ಸದರಿಯವರುಗಳ ಅಮಾನತ್ತನ್ನು ತೆರವುಗೊಳಿಸಲಾಗಿತ್ತು.

ಶ್ರೀ ನಾರಾಯಣ ಹುಡಗಿ, ಅಂದಿನ ದ್ವಿತೀಯ ದರ್ಜೆ ಉಗ್ರಾಣ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಲಬುರಗಿ ರವರು ಸೇರಿದಂತೆ ಒಟ್ಟು 8 ಜನ ಆಪಾದಿತರುಗಳ ವಿರುದ್ಧದ ಆರೋಪಗಳು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿಲ್ಲವಾದ್ದರಿಂದ ಸದರಿಯವರುಗಳನ್ನು ಮೇಲೆ ಕ್ರಮ ಸಂಖ್ಯೆ. (3)ರಲ್ಲಿ ಓದಲಾದ ದಿನಾಂಕ. 27.11.2012ರ ಆದೇಶದಲ್ಲಿ ಆರೋಪಗಳಿಂದ ದೋಷಮುಕ್ತಗೊಳಿಸಲಾಗಿರುತ್ತದೆ.

ಶ್ರೀ ನಾರಾಯಣ ಹುಡಗಿ ರವರು ಮೇಲೆ ಕ್ರಮ ಸಂಖ್ಯೆ. (4)ರಲ್ಲಿ ಓದಲಾದ ದಿನಾಂಕ. 26.09.2016ರಂದು ಸರ್ಕಾರಕ್ಕೆ ಸಲ್ಲಿಸಿರುವ ಮನವಿಯಲ್ಲಿ ಸರ್ಕಾರದ ದಿನಾಂಕ. 27.11.2012ರ ಆದೇಶದಲ್ಲಿ ತಮ್ಮನ್ನು ಆರೋಪಗಳಿಂದ ದೋಷಮುಕ್ತಮಾಡಿರುವುದರಿಂದ ದಿನಾಂಕ 06.09.2005 ರಿಂದ 05.07.2006 ರವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವಂತೆ ಕೋರಿರುತ್ತಾರೆ.

ಮು.ತಿ.ನೋ.

ಸರ್ಕಾರವು ಶ್ರೀ ನಾರಾಯಣ ಹುಡಗಿ ರವರ ಮನವಿಯನ್ನು ಪರಿಶೀಲಿಸಿದ್ದು, ಸರ್ಕಾರದ ಆದೇಶ ದಿನಾಂಕ 27.11.2012ರಲ್ಲಿ ಶ್ರೀ ನಾರಾಯಣ ಹುಡಗಿ ಇವರ ವಿರುದ್ಧದ ಆರೋಪಗಳಿಂದ ದೋಷಮುಕ್ತಗೊಳಿಸಿರುವುದರಿಂದ ಸದರಿಯವರು ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 332 ಜಿಪಅ 2016, ಬೆಂಗಳೂರು,**
**ದಿನಾಂಕ. 18.01.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ನಾರಾಯಣ ಹುಡಗಿ, ಅಂದಿನ ದ್ವಿತೀಯ ದರ್ಜೆ ಉಗ್ರಾಣ ಸಹಾಯಕರು (ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕಲಬುರಗಿ ಇವರು ದಿನಾಂಕ 06.09.2005 ರಿಂದ 05.07.2006 ರವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 100 (3) ರಡಿಯಲ್ಲಿ ಕರ್ತವ್ಯದ ಮೇಲೆ ಕಳೆದ ಅವಧಿಯೆಂದು ಪರಿಗಣಿಸಿ, ಇವರನ್ನು ಅಮಾನತ್ತುಗೊಳಿಸದೇ ಇದ್ದಿದ್ದರೆ ಇವರು ಪಡೆಯಲು ಹಕ್ಕುಳ್ಳವರಾಗಿರುತ್ತಿದ್ದ ಪೂರ್ಣ ವೇತನ ಮತ್ತು ಭತ್ಯೆಗಳನ್ನು ಸಂದಾಯ ಮಾಡಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಪೊಕ್ಕಲಕಟ್ಟ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ / ಬೀದರ್.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
6. ಸಂಬಂಧಪಟ್ಟ ನೌಕರರಿಗೆ.
7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಅಪರ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
8. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
9. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.